ಅ) ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹಿಂದಿ ಶಿಕ್ಷಕರ ಹುದ್ದೆಗಳೆಷ್ಟು?

ಆ) ಹಿಂದಿ ಶಿಕ್ಷಕ್ ಪರೀಕ್ಷೆಯಲ್ಲಿ ತೇರ್ಗಡೆಯಾದವರಿಗೆ ಹಿಂದಿ ಶಿಕ್ಷಕರ ಹುದ್ದೆಗೆ ಏಕೆ ಆದ್ಯತೆ ನೀಡುತ್ತಿಲ್ಲ?

ಇ) ಮುರಾರ್ಜಿ ಶಾಲೆಗಳಿಗೆ ನೇಮಕ ಹೊಂದಿದ ಹಿಂದಿ ಶಿಕ್ಷಕರ ಹುದ್ದೆಯನ್ನು ರದ್ದು ಮಾಡಿದ ಆದೇಶವನ್ನು ರಾಜ್ಯ ಉಚ್ಚ ನ್ಯಾಯಾಲಯವು ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ನೇಮಕಾತಿ ರದ್ದುಪಡಿಸಿದ ಶಿಕ್ಷಕರಿಗೆ ಯಾವಾಗ ಆದೇಶ ಕೊಡಲಾಗುವುದು.

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಪ್ರಾಥಮಿಕ ಶಾಲೆಗಳಲ್ಲಿ - 423

ಪ್ರಾಢ ಶಾಲೆಗಳಲ್ಲಿ - 443

ಆ) ದಿನಾಂಕ:15/11/2001ರ ಆದೇಶ ಸಂಖ್ಯೆ:ಇಡಿ/261/ಪಿ.ಟಿ.ಐ/1997ರ ಪ್ರಕಾರ ಹಿಂದಿ ಶಿಕ್ಷಕ್ ಮತ್ತು ಹಿಂದಿ ಸ್ನಾತಕ್ ಕೋರ್ಸ್‌ಗಳು ಬಿಇಡಿಗೆ ಸಮಾನಾಂತರವಲ್ಲವೆಂದು ಆದೇಶಿಸಲಾಗಿದ್ದ ಕಾರಣಕ್ಕಾಗಿ

ಇ) ಶಿಕ್ಷಣ ಇಲಾಖೆ ಮುರಾಜಿರ್ಜ ಶಾಲೆಗಳಲ್ಲಿ ಯಾವುದೇ ಹಿಂದಿ ಶಿಕ್ಷಕರ ಹುದ್ದೆಯನ್ನು ರದ್ದುಪಡಿಸಿರುವುದಿಲ್ಲ.

ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮೂಲಭೂತ ಸೌಕರ್ಯ

916 (1244) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಬಹುತೇಕ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ಹಾಗೂ ಕೊಠಡಿಗಳ ಸೌಲಭ್ಯವನ್ನು ಒಳಗೊಂಡಂತೆ ಮೂಲಭೂತ ಸೌಕರ್ಯದ ವ್ಯವಸ್ಥೆ ಇಲ್ಲದೇ ಇರುವುದನ್ನು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ಈ ಮೂಲಭೂತ ಸೌಕರ್ಯಗಳನ್ನು ಒದಗಿ ಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಬಂದಿದೆ

ಆ) ಮೂಲಭೂತ ಸೌಕರ್ಯಗಳನ್ನು ಒದಗಿಸಲು 1995-96ನೇ ಸಾಲಿನಿಂದಲೂ ರಾಜ್ಯ ಮುಂದುವರೆದ ಯೋಜನೆಯಡಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಕುಡಿಯುವ ನೀರು, ಶೌಚಾಲಯ, ಹಾಗೂ ಕೊಠಡಿಗಳ ಸೌಲಭ್ಯವನ್ನು ಕಲ್ಪಿಸಲು ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಅಲ್ಲದೇ ಪ್ರಧಾನ ಮಂತ್ರಿ ಗ್ರಾಮೋದಯ ಯೋಜನೆ, ಹನ್ನೊಂದನೇ ಹಣಕಾಸು ಯೋಜನೆ, ಹುಡ್ಕೋ ನೆರವು ಹಾಗೂ ನಬಾರ್ಡ್ ನೆರವು ಮತ್ತು ಸರ್ವಶಿಕ್ಷಾ ಅಭಿಯಾನ ಯೋಜನೆಯಡಿ ಅನುದಾನವನ್ನು ಒದಗಿಸಲಾಗುತ್ತಿದೆ.

ರಾಜ್ಯದಲ್ಲಿ ಕಲಾವಿದರಿಗೆ ಮಸಾಶನ

917 (1245) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಲಾವಿದರಿಗೆ ನೀಡುವ ಮಾಸಾಶನವನ್ನು ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಪರಿಷ್ಕೃತವಾದ ಮೊತ್ತದ ಮಾಸಾಶನವನ್ನು ಎಂದಿನಿಂದ ನೀಡಲಾಗುವುದು.

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವೆಯವರು):

ಅ) ಇತ್ತೀಚೆಗೆ ದಿನಾಂಕ 1.11.2002 ರಿಂದ ಜಾರಿಗೆ ಬರುವಂತೆ ರೂ.250.00 ರಿಂದ 500.00 ಕ್ಕೆ ಹೆಚ್ಚಿಸಲಾಗಿದೆ.

ಆ) ಇತ್ತೀಚೆಗೆ ದಿನಾಂಕ 1.11.2002 ರಿಂದ ಜಾರಿಗೆ ಬರುವಂತೆ ರೂ.250.00 ರಿಂದ 500.00 ಕ್ಕೆ ಹೆಚ್ಚಿಸಲಾಗಿದೆ.

ಇ) ದಿನಾಂಕ:1.11.2002 ರಿಂದ ನೀಡಲಾಗಿದೆ.

ಮಂಡ್ಯ ತಾಲ್ಲೂಕಿನ ಹಮ್ಮಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕಟ್ಟಡದ ಸೌಲಭ್ಯ

918 (1246) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ತಾಲ್ಲೂಕಿನಲ್ಲಿ ಹಮ್ಮಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸೂಕ್ತ ಕಟ್ಟಡದ ಸೌಲಭ್ಯವು ಇಲ್ಲದೇ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ 2003-04 ನೇ ಆರ್ಥಿಕ ವರ್ಷದಲ್ಲಿ ಕಟ್ಟಡದ ಸೌಲಭ್ಯ ದೊರಕಿಸಿಕೊಡಲು ಸರ್ಕಾರವು ಕ್ರಮ ಕೈಗೊಳ್ಳುವುದೆ;

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಂದಿದೆ.

ಆ) ಜಿಲ್ಲಾ ಪಂಚಾಯತ್ ಆಯವ್ಯಯದಲ್ಲಿ 2003-04 ನೇ ಸಾಲಿಗೆ ಅನುದಾನ ಒದಗಿಸಿಕೊಂಡು.

ಇ) ಪ್ರಸ್ತಾವನೆ ಸಲ್ಲಿಸಲು ಸೂಚಿಸಿದ್ದು, ಪ್ರಸ್ತಾವನೆ ಬಂದ ನಂತರ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಮಂಡ್ಯ ಜಿಲ್ಲಾ ಪಂಚಾಯತ್‌ನ ವ್ಯಾಪ್ತಿಯಲ್ಲಿನ ಗ್ರಾಮೀಣ ಭಾಗದಲ್ಲಿ ಆಪ್ಟಿಕಲ್ ಫೈಬರ್ ಕೇಬಲ್ ಅಳವಡಿಕೆ

919 (1247) ಶ್ರೀ ಎಂ.ಎಸ್.ಆತ್ಮಾನಂದ (ಮಂಡ್ಯ): ಮಾನ್ಯ ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿನ ಗ್ರಾಮೀಣ ಭಾಗದಲ್ಲಿ ಹಾಯ್ದು ಹೋಗುವ ರಸ್ತೆಗಳಲ್ಲಿ, ಆಪ್ಟಿಕಲ್ ಫೈಬರ್ ಕೇಬಲ್‌ಗಳನ್ನು (OFC) ಅಳವಡಿಸಲು, ವಿವಿಧ ಕಂಪನಿಗಳಿಗೆ ಪರವಾನಿಗೆ ನೀಡಲಾಗಿದೆಯೇ ಹಾಗೂ ಇದಕ್ಕೆ ಶುಲ್ಕವನ್ನು ವಿಧಿಸಲಾಗಿದೆಯೇ;

ಆ) ಹಾಗಿದ್ದಲ್ಲಿ ಯಾವ ಯಾವ ಕಂಪನಿಗಳಿಗೆ ಅನುಮತಿಯನ್ನು ನೀಡಲಾಗಿದೆ ಹಾಗೂ ಪರವಾನಿಗೆ ನೀಡಲಾಗಿರುವ ಸಂಸ್ಥೆಗಳಿಂದ ಎಷ್ಟು ಮೊತ್ತದ ಶುಲ್ಕವನ್ನು ಸಂಗ್ರಹಿಸಲಾಗಿದೆ;